# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯ ಯೋಜನೆಗಳಿಗೆ 2019-20ನೇ ಸಾಲಿನಲ್ಲಿ ಒದಗಿಸಿರುವ ಆಯವ್ಯಯದಲ್ಲಿ ನಾಲ್ಕನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 134 ಎಂಡಿಎಸ್ 2019, ದಿನಾಂಕ:26.04.2019
2) ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 18 ಬಿಪಿಇ 2018, ದಿನಾಂಕ: 19/03/2019.
3) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 134 ಎಂಡಿಎಸ್ 2019, ದಿನಾಂಕ:15.05.2019
4) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 134 ಎಂಡಿಎಸ್ 2019, ದಿನಾಂಕ:01.08.2019
5) ಸರ್ಕಾರಿ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 134 ಎಂಡಿಎಸ್ 2019, ದಿನಾಂಕ: 14.11.2019.
6) ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ಇವರ ಪತ್ರ ಸಂಖ್ಯೆ: ಅಸಂನಿ/ಆ.ವ್ಯ/ಬಿಡುಗಡೆ/ಸಿಆರ್/06/2019-20, ನಾಂಕ:08.01.2020
7) ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಇವರ ಪತ್ರ ಸಂಖ್ಯೆ: ಕರಾವಮಂ/ಬಿಲ್ಸ್/07/2019-20, ದಿನಾಂಕ :08.01.2020.
8) ನಿಬಂಧಕರು, ಕರ್ನಾಟಕ ಉರ್ದು ಅಕಾಡೆಮಿ ಇವರ ಪತ್ರ ಸಂಖ್ಯೆ: ಕಉಅ/ಅಕಾಡೆಮಿ/ಅನುದಾನ/37/2019-20, ದಿನಾಂಕ:14.01.2020
9) ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ಹಜ್ ಸಮಿತಿ ಇವರ ಪತ್ರ ಸಂಖ್ಯೆ:ಕೆಹೆಚ್‌ಸಿ/ಎಸಿಟಿ/12/2019-20, ದಿನಾಂಕ:14.01.2020
10) ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ಇವರ ಪತ್ರ ಸಂಖ್ಯೆ:ಕರಾಅಆ/ಆಡಳಿತ/19-20, ದಿನಾಂಕ:16.01.2020.
11) ಆರ್ಥಿಕ ಇಲಾಖೆಯ (ಆಯವ್ಯಯ ಮತ್ತು ಸಂಪನ್ಮೂಲ) ಇವರ ಆದೇಶ ಸಂಖ್ಯೆ:ಎಫ್‌ಡಿ/01/ಬಿಎಫ್‌ಪಿ/2020, ದಿನಾಂಕ:13.01.2020.

**ಪ್ರಸ್ತಾವನೆ:**

ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ 2018-19ನೇ ಸಾಲಿನಲ್ಲಿ ಚಾಲ್ತಿಯಲ್ಲಿದ್ದ ಯೋಜನಾ ಕಾರ್ಯಕ್ರಮಗಳನ್ನು 2019-20ನೇ ಸಾಲಿನವರೆಗೆ ಮುಂದುವರೆಸಿ ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಸರ್ಕಾರದ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಆರ್ಥಿಕ ಇಲಾಖೆಯು 2019-20ನೇ ಸಾಲಿನ ಆಯವ್ಯದಲ್ಲಿ ನಿಗಧಿಪಡಿಸಲಾದ ಅನುದಾನದಲ್ಲಿ ಶೇ.25.%ರಷ್ಟು ಅನುದಾನವನ್ನು ನಿಗಧಿತ ಕಾಲದಲ್ಲಿ ಸಂಬಂಧಪಟ್ಟ ಇಲಾಖೆಯವರು ವೆಚ್ಚ ಮಾಡಲು ಅನುಮತಿ ನೀಡಿ ಆದೇಶ ಹೊರಡಿಸಲಾಗಿದೆ

..2.

D/2020-21/SHRI/SO1/KKGO

ಮೇಲ್ಕಂಡ ಓದಲಾದ ಕ್ರಮ ಸಂಖ್ಯೆ (3) (4) ಮತ್ತು (5)ರಲ್ಲಿ ಆರ್ಥಿಕ ಇಲಾಖೆಯು ಅನುಮತಿ ನೀಡಿರುವಂತೆ 2019-20ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಲಾದ ಅನುದಾನದಲ್ಲಿ ಶೇ:25 ರಷ್ಟು ಮೊದಲನೇ, ಎರಡನೇ ಮತ್ತು ಮೂರನೇ ತ್ರೈಮಾಸಿಕ ಕಂತಿನ ಅನುದಾನವಾಗಿ ಅಧೀನ ಇಲಾಖೆಗಳಿಗೆ ಬಿಡುಗಡೆ ಮಾಡಿ ಆದೇಶ ಹೊರಡಿಸಲಾಗಿದೆ.

2019-20ನೇ ಆರ್ಥಿಕ ವರ್ಷದಲ್ಲಿ ಒದಗಿಸಲಾಗಿರುವ ಆಯವ್ಯಯದಲ್ಲಿ ಆರ್ಥಿಕ ಇಲಾಖೆಯು ಖಜಾನೆ-2 ನಲ್ಲಿ ಬಿಡುಗಡೆ ಮಾಡಿರುವಂತೆ ನಾಲ್ಕನೇ ತ್ರೈಮಾಸಿಕ ಕಂತಿನ ಶೇ. 25%ರಷ್ಟು ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ; ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ; ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ; ನಿಬಂಧಕರು, ಕರ್ನಾಟಕ ಉರ್ದು ಅಕಾಡೆಮಿ ಮತ್ತು ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ರಾಜ್ಯ ಹಜ್ ಸಮಿತಿ ಇವರುಗಳು ಮೇಲೆ ಓದಲಾದ ಕ್ರಮ ಸಂಖ್ಯೆ: (6) ರಿಂದ (10)ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆಗಳನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಗಳನ್ನು ಹಾಗೂ 2019-20ನೇ ಸಾಲಿನ ಆರ್ಥಿಕ ವರ್ಷದಲ್ಲಿ ಒದಗಿಸಲಾಗಿರುವ ಆಯವ್ಯಯದ ಅನುದಾನದಲ್ಲಿ ನಾಲ್ಕನೇ ತ್ರೈಮಾಸಿಕ ಕಂತು ಶೇ:25% ರಷ್ಟು ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಪರಿಶೀಲಿಸಲಾಗಿದ್ದು ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರಿ ಆದೇಶ ಸಂಖ್ಯೆ: **MWD 134 MDS 2019**, ಬೆಂಗಳೂರು ದಿನಾಂಕ:31.01.2020</u>

ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಲ್ಲಿ 2019-20ನೇ ಆರ್ಥಿಕ ಸಾಲಿನಲ್ಲಿ ಮುಂದುವರೆಸಲಾಗಿರುವ ಕೆಳಕಂಡ ಯೋಜನೆಗಳಿಗೆ ಪ್ರಸಕ್ತ ಸಾಲಿನಲ್ಲಿ ಮಂಜೂರಾಗಿರುವ ಆಯವ್ಯಯದಲ್ಲಿ ನಾಲ್ಕನೇ ತ್ರೈಮಾಸಿಕ ಕಂತಾಗಿ ಆರ್ಥಿಕ ಇಲಾಖೆಯು ಈಗಾಗಲೇ **ಖಜಾನೆ-2 ರಲ್ಲಿ ಬಿಡುಗಡೆ ಮಾಡಿರುವ ಶೇ. 25%ರಷ್ಟು** ಅನುದಾನವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

..3.